# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1269
ಸದಸ್ಯರ ಹೆಸರು : ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು)
ಉತ್ತರಿಸುವ ದಿನಾಂಕ : 24-12-2021.
ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
| --- | --- | --- |
| (ಅ) | ರಾಜ್ಯದಲ್ಲಿರುವ ಗ್ರಾಮ ಪಂಚಾಯತ್ ಮತ್ತು ಪಟ್ಟಣ ಪಂಚಾಯತ್‌ಗಳ ವ್ಯಾಪ್ತಿಯಲ್ಲಿ ಬರುವ ಅನಧಿಕೃತ ನಿವೇಶನ, ಬಡಾವಣೆ ಮತ್ತು ಕಟ್ಟಡಗಳನ್ನು ದಂಡವಿಧಿಸುವ ಮೂಲಕ ಸಕ್ರಮಗೊಳಿಸಲು ಅಕ್ರಮ-ಸಕ್ರಮ ಯೋಜನೆಯನ್ನು ತಯಾರಿಸಿ, ಜಾರಿಗೊಳಿಸಲು ಸಚಿವರ ಸಂಪುಟದ ಉಪ-ಸಮಿತಿ ಶಿಫಾರಸ್ಸು ಮಾಡಿರುವುದು ನಿಜವೇ; ಹಾಗಿದ್ದಲ್ಲಿ, ಈ ಯೋಜನೆ ರೂಪ-ರೇಷೆಗಳು ಒಳಗೊಂಡಂತೆ ಸಂಪೂರ್ಣ ಮಾಹಿತಿ ನೀಡುವುದು) | ಹೌದು.<br><br>ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿನ ಇ-ಖಾತಾ (ನಮೂನೆ-3) ಮತ್ತು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9, 11ಎ ಮತ್ತು 11ಬಿ ನೀಡುವ ಕುರಿತು ಸಮಸ್ಯೆಗಳನ್ನು ಪರಿಹರಿಸಲು ಸಚಿವ ಸಂಪುಟ ಉಪ ಸಮಿತಿಯನ್ನು ರಚಿಸಲಾಗಿರುತ್ತದೆ.<br><br>ಸ್ಥಳೀಯ ಯೋಜನಾ ಪ್ರದೇಶ ಘೋಷಣೆಯಾಗಿ ಮಹಾಯೋಜನೆ ಅನುಮೋದನೆಯಾಗಿರುವ ಪ್ರದೇಶಗಲ್ಲಿ ದಿ:19.10.2013ರ ಮುಂಚಿತವಾಗಿ ಬಂದಿರುವ ಎಲ್ಲಾ ತರಹದ ಅನಧಿಕೃತ ಅಭಿವೃದ್ಧಿಗಳನ್ನು ಸಕ್ರಮಗೊಳಿಸಲು ಸರ್ಕಾರವು ಅಧಿಸೂಚನೆ ಸಂಖ್ಯೆ : ನಅಇ 556 ಮೈಅಪ್ರಾ 2013(1) ದಿ:28.05.2014 ರಲ್ಲಿ Karnataka Town and Country Planning (Regularisation of unauthorised Development or Constructions) Rules, 2014 ನ್ನು ಜಾರಿಗೆ ತಂದಿರುತ್ತದೆ. ಸದರಿ ನಿಯಮಕ್ಕೆ ಮಾನ್ಯ ಸರ್ವೋಚ್ಚ ನ್ಯಾಯಾಲಯವು SLA(c) No(s).957/2017 ರಲ್ಲಿ ದಿ:13.07.2017 ರಂದು ಮಧ್ಯಂತರ ತಡೆಯಾಜ್ಞೆಯನ್ನು ಮುಂದಿನ ತೀರ್ಪಿನವರೆಗೂ ಮುಂದುವರೆಸುವಂತೆ ಆದೇಶ ನೀಡಿರುತ್ತದೆ. |
| (ಆ) | ಈ ಅಕ್ರಮ-ಸಕ್ರಮ ಯೋಜನೆ ಅಡಿ ಸಕ್ರಮಗೊಳ್ಳುವ ಆಸ್ತಿಗಳನ್ನು ಪಂಚಾಯತ್ ರಾಜ್ ಇಲಾಖೆ ಅಳವಡಿಸಿರುವ ಇ-ಸ್ವತ್ತು ತಂತ್ರಾಂಶದ ಅಡಿ ತಂದು ಸಂಬಂಧಿಸಿದ ಗ್ರಾಮ ಪಂಚಾಯತ್‌ಗಳಿಂದ ಫಾರಂ-9 ಮತ್ತು 11ಗಳನ್ನು ವಿತರಿಸಬೇಕಾಗಿದ್ದು, ರಚಿಸಿರುವ ಲೇಔಟ್ ಅಥವಾ ನಿವೇಶನಗಳೀಗೆ ಕೇವಲ ಅನ್ಯ ಸಕ್ರಣ ಮಾತ್ರ ಪಡೆದಿದು, ಸ್ಥಳೀಯ ಯೋಜನಾ ಪ್ರಾಧಿಕಾರಿಗಳಿಂದ ಅನುಮೋದನೆ ಪಡೆಯದಿರುವ ಹಲವಾರು ಪ್ರಕರಣಗಳು ಇರುವುದು ರಾಜ್ಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ರಾಜ್ಯ ಸರ್ಕಾರ ಸಮೀಕ್ಷೆ ಅಥವಾ ಗ್ರಾಮ ಪಂಚಾಯತ್‌ಗಳಿಂದ ಮಾಹಿತಿಯನ್ನು ಕಲೆ ಹಾಕಿದ್ದಿಯೇ; ಮತ್ತು ಇದರಿಂದ ಗ್ರಾಮ ಪಂಚಾಯತ್‌ಗಳಿಗೆ ಬರುವ ಆದಾಯ ಎಷ್ಟು; (ಸಂಪೂರ್ಣ ಮಾಹಿತಿ ನೀಡುವುದು) | |

| | | |
|---|---|---|
| (ಇ) | ರಾಜ್ಯದಲ್ಲಿ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಆಸ್ತಿ ನೋಂದಣಿಯನ್ನು ಸರಳೀಕರಣಗೊಳಿಸಲು ಹಾಗೂ ಅಕ್ರಮಗಳನ್ನು ತಡೆಯಲು ರಾಜ್ಯ ಸರ್ಕಾರ ಇ-ಸ್ವತ್ತು ತಂತ್ರಾಂಶ ವ್ಯವಸ್ಥೆಯನ್ನು 2013 ರಿಂದ ಜಾರಿಗೆ ತಂದಿದ್ದು, ಸರ್ಕಾರದ ಈ ಸುದುದ್ದೇಶವನ್ನು ಗಾಳಿಗೆ ತೂರಿ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಮತ್ತು ಸದಸ್ಯರು ಒಳಗೊಂಡಂತೆ ಅನ್ಯಾಯ ಮತ್ತು ಅಕ್ರಮಗಳು ನಡೆಯುತ್ತಿರುವುದು ಮತ್ತು ಇ-ಸ್ವತ್ತು ತಂತ್ರಾಂಶದ ಅಡಿ ನೀಡಬೇಕಾಗಿರುವ ದಾಖಲೆಗಳನ್ನು ಒದಗಿಸಲು ಭ್ರಷ್ಟಾಚಾರ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಹಾಗಿದ್ದಲ್ಲಿ ಈ ಅಘವ್ಯವಸ್ಥೆಯನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ವಿವರ ನೀಡುವುದು) | ಬಂದಿದೆ.<br><br>ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳ ಮೇಲೆ ಕರ್ನಾಟಕ ಸಿವಿಲ್ ಸೇವಾ (ಸಿಸಿಎ) ನಿಯಮಗಳು, 1957 ರನ್ವಯ ಶಿಸ್ತು ಕ್ರಮ ಜರುಗಿಸಲಾಗುತ್ತದೆ.<br><br>ಗ್ರಾಮ ಪಂಚಾಯತಿ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳ ಮೇಲೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ), 48(4) ಮತ್ತು 48(5) ರನ್ವಯ ಗ್ರಾಮ ಪಂಚಾಯತಿ ಸದಸ್ಯತ್ವ ಸ್ಥಾನ, ಅಧ್ಯಕ್ಷ ಸ್ಥಾನ ಮತ್ತು ಉಪಾಧ್ಯಕ್ಷ ಸ್ಥಾನದಿಂದ ತೆಗೆದುಹಾಕಲಾಗುತ್ತದೆ. |

ಸಂಖ್ಯೆ: ಗ್ರಾಅಪ 458 ಗ್ರಾಪಂಅ 2021

**(ಕೆ.ಎಸ್. ಈಶ್ವರಪ್ಪ)**
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.